75
68

**ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಜಿಎಂ\47\2018\ಉನಿವಿ-4

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 02/04/2019

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ**

**ವಿಷಯು:** ಸರ್ಕಾರಿ ನೌಕರರಾದ ಗದಗ ನಿರ್ಮಿತಿ ಕೇಂದ್ರದ ಯೋಜನಾ ಅಭಿಯಂತರರಾದ ಶ್ರೀ.ವಿ.ಕೆ.ನೀಲಗುಂದ ರವರ ಕರ್ತವ್ಯ ಲೋಪದ ಬಗ್ಗೆ.

**********

ಗದಗ ಜಿಲ್ಲೆ ಮತ್ತು ತಾಲ್ಲೂಕ್ ಚಿಂಚಳಿ ಅಂಚೆ ನಿವಾಸಿಯಾದ ಶ್ರೀ.ಹುಚ್ಚಪ್ಪ ಯಲ್ಲಪ್ಪ ಸಂದಕದ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಗದಗ ನಿರ್ಮಿತಿ ಕೇಂದ್ರದ 1) ಜಿಲ್ಲಾ ವ್ಯವಸ್ಥಾಪಕರಾದ ಶ್ರೀ.ಜಿ.ವಿ.ಶಿರೋಳ ಮತ್ತು 2) ಯೋಜನಾ ಅಭಿಯಂತರರಾದ ಶ್ರೀ.ವಿ.ಕೆ.ನೀಲಗುಂದ (ಇನ್ನು ಮುಂದೆ ಕ್ರಮವಾಗಿ, '1 ಮತ್ತು 2ನೇ ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಗದಗ ಜಿಲ್ಲೆ ಮತ್ತು ತಾಲ್ಲೂಕ್ ಮಲ್ಲಸಮುದ್ರ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಾಂಪೌಂಡ್ ಗೋಡೆ ಮತ್ತು ಗಾರ್ಡ್ ಕೊಠಡಿಯ ಕಾಮಗಾರಿ ಕಳಪೆಯಾಗಿದೆಯೆಂದು ಹೇಳಿದ್ದಾರೆ.

3. ದೂರಿಗೆ 1 ಮತ್ತು 2ನೇ ಎದುರುದಾರರುಗಳಿಂದ ಆಕ್ಷೇಪಣೆಯನ್ನು ಕೇಳಲಾಗಿ, 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ದೂರಿನಲ್ಲಿ ಹೇಳಿದ ಕಾಮಗಾರಿಯು ಪ್ರಗತಿಯಲ್ಲಿರುವಾಗ ಹಂತ ಹಂತದಲ್ಲಿ ಕಾಮಗಾರಿಯ ತಪಾಸಣೆಯನ್ನು ಮಾಡಿರುವುದರಿಂದ, ಸದರಿ ಕಾಮಗಾರಿಯನ್ನು ಉತ್ತಮ ಗುಣಮಟ್ಟದ ಸಾಮಗ್ರಿಗಳನ್ನು ಉಪಯೋಗಿಸಿರುವುದು ಕಂಡು ಬಂದಿದೆ. ಸದರಿ ಕಾಮಗಾರಿಯಲ್ಲಿ ನ್ಯೂನತೆಗಳು ಕಂಡು ಬಂದಲ್ಲಿ, ಆ

N. Anand

ನ್ಯೂನತೆಗಳನ್ನು ಸರಿಪಡಿಸಿ, ಉತ್ತಮ ರೀತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ, ಸಂಬಂಧಪಟ್ಟ ಇಲಾಖೆಗೆ ಹಸ್ತಾಂತರಿಸಲಾಗುವುದೆಂದು ಹೇಳಿದ್ದಾರೆ.

4. ಎರಡನೇ (2ನೇ) ಎದುರುದಾರರು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿಲ್ಲ.

5. 1ನೇ ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಪ್ರತ್ಯುತ್ತರ ಸಲ್ಲಿಸಿಲ್ಲ.

6. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

1) ಗದಗ ಜಿಲ್ಲೆ ಮತ್ತು ತಾಲ್ಲೂಕ್ ಮಲ್ಲಸಮುದ್ರ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಾಂಪೌಂಡ್ ಗೋಡೆ ಮತ್ತು ಗಾರ್ಡ್ ಕೊಠಡಿಯ ನಿರ್ಮಾಣ ಕಾಮಗಾರಿಯ ಅಂದಾಜು ಮೊತ್ತ ₹77 ಲಕ್ಷಗಳಾಗಿದ್ದು, ಸದರಿ ಕಾಮಗಾರಿಯನ್ನು ನಿರ್ಮಿತಿ ಕೇಂದ್ರ, ಗದಗ ರವರಿಗೆ ವಹಿಸಿದೆ. ಏಪ್ರಿಲ್, 2018ರ ಸಮಯಕ್ಕೆ ಸದರಿ ಕಾಮಗಾರಿ ಪ್ರಗತಿಯಲ್ಲಿರುವುದು ಕಂಡು ಬಂದಿದೆ;
2) ಕಾಮಗಾರಿಯ ಅಳತೆ ಪುಸ್ತಕದನ್ವಯ ಸದರಿ ಅಳತೆ (Pre-measurement ಸೇರಿ)ಯನ್ನು ದಾಖಲಿಸಿದ ದಿನಾಂಕ. ಪುಟ ಸಂಖ್ಯೆ–21 ರಿಂದ 31ರವರೆಗೆ ಎಲ್ಲಿಯೂ ದಾಖಲಿಸದಿರುವುದು ಕಂಡು ಬಂದಿದೆ;
3) ಕರ್ನಾಟಕ ಲೋಕೋಪಯೋಗಿ ಸಂಹಿತೆ ಅನ್ವಯ ಕೆಲಸವನ್ನು ನಿರ್ವಹಣೆ \ ಪರಿವೀಕ್ಷಣೆ ಮಾಡುವ ಅಭಿಯಂತರರು ಅಳತೆ ಪುಸ್ತಕದಲ್ಲಿ ಮಾಡುವ ಪ್ರತಿಯೊಂದು ನಮೂದಿನ ದಿನಾಂಕವನ್ನು ತಪ್ಪದೇ ಬರೆಯ ಬೇಕಿದ್ದು, ದಿನಾಂಕವನ್ನು ಬರೆಯದೇ ಇರುವುದು ಗಂಭೀರ ಲೋಪವೆಂದು ಪರಿಗಣಿಸಲ್ಪಡುತ್ತದೆ. ಸದರಿ ದೂರಿನ ಕಾಮಗಾರಿಯ ಅಳತೆಯನ್ನು 2ನೇ ಎದುರುದಾರರೇ ದಾಖಲಿಸಿದ್ದಾರೆಂದು 1ನೇ ಎದುರುದಾರರು ದಿನಾಂಕ:14/01/19ರ ಪತ್ರದಲ್ಲಿ ಹೇಳಿದ್ದಾರೆ. ಕಾರಣ, 2ನೇ ಎದುರುದಾರರ ಕರ್ತವ್ಯ ಲೋಪ ಮೇಲ್ನೋಟಕ್ಕೆ ಸಾಬೀತಾಗುತ್ತದೆ.

7. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು, ಆಕ್ಷೇಪಣೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ 2ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

BCD/47/18

73



8. ದೂರಿನ ಕಾಮಗಾರಿಗೆ ಸಂಬಂಧಿಸಿದಂತೆ, 1ನೇ ಎದುರುದಾರರ ಯಾವುದೇ ಕರ್ತವ್ಯ ಲೋಪ ಕಂಡು ಬಾರದಿರುವುದರಿಂದ, 1ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಟ್ಟಿದೆ.

9. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, 2ನೇ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

10. ಅದಲ್ಲದೆ 2ನೇ ಎದುರದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ಅಡಿ ಈ ಸಂಸ್ಥೆಗೆ ವಹಿಸ ಬೇಕೆಂದು ಕೋರಿದೆ.

11. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

N. Anand

2/4

(ನ್ಯಾಯಾಮೂರ್ತಿ ಎನ್.ಆನಂದ)
ಉಪಲೋಕಾಯುಕ್ತ,
ಕರ್ನಾಟಕ ರಾಜ್ಯ.

02/04